**Akashvani : Bangalore**
**Regional Bulletin In Kannada**
**23.06.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**23.06.2025 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

೧. ಶೀಘ್ರದಲ್ಲೇ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ - ಗೃಹ ಸಚಿವ ಜಿ. ಪರಮೇಶ್ವರ್

೨. ಜುಲೈ ೧೫ರಿಂದ ಪಂಚಾಯಿತಿ ಮಟ್ಟದಲ್ಲೂ ಇ-ಖಾತಾ ಆಂದೋಲನಾ ಆರಂಭ

೩. ಬೆಂಗಳೂರಿನ ಕಾಡುಗೋಡಿಯಲ್ಲಿ ೧೨೦ ಎಕ್ರೆ ಅರಣ್ಯ ಭೂಮಿ ಒತ್ತುವರಿ ತೆರವು

೪. ಕೌನ್ಸಿಲಿಂಗ್ ಮೂಲಕ ಗ್ರಾಮಪಂಚಾಯಿತಿ ಕಾರ್ಯದರ್ಶಿ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವರ್ಗಾವಣೆ

**<><*<><>*><>**

ಪಿಎಸ್‌ಐ ಹಗರಣ ನಂತರ ಐದು ವರ್ಷಗಳಿಂದ ಇಲ್ಲಿವರೆಗೂ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿರಲಿಲ್ಲ. ಈಗ ಶೀಘ್ರದಲ್ಲಿಯೇ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಎಂದು ಗೃಹ ಸಚಿವ ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬಾಗಲಕೋಟೆ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೊಲೀಸ್ ಇಲಾಖೆಯಲ್ಲಿ ಕಳೆದ ಐದು ವರ್ಷಗಳಿಂದ ಯಾವುದೇ ನೇಮಕಾತಿಗಳು ಆಗಿಲ್ಲ. ಒಂದು ಸಾವಿರ ಪಿಎಸ್‌ಐ ಹುದ್ದೆಗಳು ಖಾಲಿ ಇದ್ದು, ಈಗಾಗಲೇ ೫೦೦ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯು ನಡೆದಿದ್ದು, ಕೆಲವರು ತರಬೇತಿಯಲ್ಲಿದ್ದಾರೆ. ಇಲಾಖೆಯಲ್ಲಿರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಹಂತ-ಹಂತವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಧ್ವನಿ : ಜಿ ಪರಮೇಶ್ವರ್, ಗೃಹ ಸಚಿವ ( ೩೦ ಸೆಕೆಂಡ್‌ಗಳು)

**<><*<><>*><>**

ಜುಲೈ ೧೫ ರಿಂದ ಇ-ಖಾತಾ ಆಂದೋಲನವನ್ನು ಪಂಚಾಯತಿ ಮಟ್ಟದಲ್ಲಿಯೂ ಪ್ರಾರಂಭಿಸಲಾಗುವುದು ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ತಿಳಿಸಿದ್ದಾರೆ. ತುಮಕೂರು ನಗರದಲ್ಲಿ ನಡೆದ ಕಂದಾಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಪಂಚಾಯಿತಿಗಳಲ್ಲಿ ಇನ್ನು ಮುಂದೆ ಇ-ಖಾತೆ ಕಡ್ಡಾಯವಾಗಲಿದ್ದು, ಖಾಸಗಿ ಜಮೀನಿನಲ್ಲಿರುವ ಬಡಾವಣೆಗಳಲ್ಲಿ ಖರೀದಿ ಪತ್ರವಿದ್ದರೆ ಮಾತ್ರ ಬಿ-ಖಾತಾ ಮಾಡಲು ಅವಕಾಶವಿದೆ ಎಂದರು. ಸ್ವಂತ ಜಮೀನಿನಲ್ಲಿ ಹತ್ತಕ್ಕೂ ಹೆಚ್ಚು ಮನೆಗಳನ್ನು ಕಟ್ಟಿಕೊಂಡು ವಾಸವಿರುವವರಿಗೆ ಉಪಗ್ರಾಮಗಳನ್ನು ಸೃಜಿಸಲು ಕ್ರಮವಹಿಸಬೇಕು. ಈಗಾಗಲೇ ಗುಂಡು ತೋಪುಗಳಲ್ಲಿ ಮನೆ ಕಟ್ಟಿಕೊಟ್ಟಿದ್ದರೆ ಮಾತ್ರ ಅಂತಹ ಗುಂಡು ತೋಪುಗಳನ್ನು ವಸತಿ ಬಡಾವಣೆಯಾಗಿ ಅನುಮೋದನೆ ನೀಡಲಾಗುವುದು ಎಂದು ಸಚಿವ ಕೃಷ್ಣಬೈರೇಗೌಡ ತಿಳಿಸಿದರು.

**<><*<><>*><>**

ಅರಣ್ಯ ಸಚಿವ ಈಶ್ವರ ಖಂಡ್ರೆ ಅವರ ಸೂಚನೆ ಮೇರೆಗೆ ಬೆಂಗಳೂರು ಪೂರ್ವ ತಾಲೂಕು ಬಿದರಹಳ್ಳಿ ಹೋಬಳಿ, ಕಾಡುಗೋಡಿ ನೆಡುತೋಪಿನ ಸರ್ವೆ ನಂಬರ್ ೧ ರಲ್ಲಿ ೧೨೦ ಎಕರೆ ಅರಣ್ಯ ಭೂಮಿ ಒತ್ತುವರಿ ತೆರವುಗೊಳಿಸಲಾಗಿದೆ. ಬಿಗಿ ಪೊಲೀಸ್ ಬಂದೋಬಸ್ತ್‌ನಲ್ಲಿ ಇಂದು ಬೆಳಗ್ಗೆ ಕಾರ್ಯಾಚರಣೆಗೆ ಇಳಿದ ಬೆಂಗಳೂರು ನಗರ ಅರಣ್ಯ ಇಲಾಖೆ ಅಧಿಕಾರಿಗಳ ನೇತೃತ್ವದ ತಂಡ, ಕಾಡುಗೋಡಿಯ ನೆಡುತೋಪಿನ ಅರಣ್ಯ ಭೂಮಿಯ ಒತ್ತುವರಿ ತೆರವು ಮಾಡಿ, ಮರು ವಶಕ್ಕೆ ಪಡೆದು, ಗಡಿ ಗುರುತಿಸಿ, ಸ್ಥಳೀಯ ಪ್ರಭೇದದ ಸಸಿಗಳನ್ನು ನೆಡುವ ಕಾರ್ಯದಲ್ಲಿ ನಿರತರಾಗಿದ್ದಾರೆ. ಇಂದು ವಶಪಡಿಸಿಕೊಳ್ಳಲಾದ ಅರಣ್ಯ ಭೂಮಿಯ ಮಾರುಕಟ್ಟೆ ಮೌಲ್ಯ ಸುಮಾರು ೪ ಸಾವಿರ ಕೋಟಿ ರೂಪಾಯಿಗೂ ಅಧಿಕ ಎಂದು ಅಂದಾಜಿಸಲಾಗಿದೆ.

**<><*<><>*><>**

ರಾಜ್ಯ ಸರ್ಕಾರದ ಆಡಳಿತದ ವ್ಯವಸ್ಥೆ ವಿರುದ್ಧ ಜನಾಂದೋಲನ ಮಾಡಬೇಕೆಂದು ಬಿಜೆಪಿ ತೀರ್ಮಾನ ಮಾಡಿದೆ. ಜನರ ವಿಶ್ವಾಸದೊಂದಿಗೆ ಯಾವ ಪ್ರದೇಶದಲ್ಲಿ, ಯಾವ ವಿಷಯ ತೆಗೆದುಕೊಂಡು ಜನಾಂದೋಲನ ರೂಪಿಸಬೇಕು ಎಂದು ಪಕ್ಷದ ಪ್ರಮುಖರ ಜೊತೆ ಚರ್ಚಿಸಿ ನಿರ್ಧರಿಸಲಾಗುವುದು ಎಂದು ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಅಭಿವೃದ್ಧಿ ಶೂನ್ಯವಾಗಿದೆ. ಅಧಿಕಾರಿಗಳ ವರ್ಗಾವಣೆಯಲ್ಲಿ ದೊಡ್ಡ ಭ್ರಷ್ಟಾಚಾರ ನಡೆದಿದೆ. ಸ್ಥಳೀಯ ಮಟ್ಟದಿಂದ ಹಿಡಿದು, ರಾಜ್ಯ ಮಟ್ಟದವರಗೆ ಅಧಿಕಾರಿಗಳ ವರ್ಗಾವಣೆಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿದರು. ಪ್ರಾಮಾಣಿಕ ಅಧಿಕಾರಿಗಳ ನೈತಿಕತೆ ಕುಂದಿದೆ. ಆಡಳಿತ ಪಕ್ಷದ ಶಾಸಕರು ಇದರ ಬಗ್ಗೆ ಮಾತಾಡಿದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಏನೂ ಸ್ಪಂದಿಸುತ್ತಿಲ್ಲ. ಸಚಿವರು ಸಂಪುಟದಲ್ಲಿ ಎತ್ತುವ ಪ್ರಶ್ನೆಗಳಿಗೆ ಸ್ಪಂದನೆ ಸಿಗುತ್ತಿಲ್ಲ ಎನ್ನುವ ಕಾರಣಕ್ಕೆ ಬಹಿರಂಗವಾಗಿ ಪತ್ರ ಬರೆಯುತ್ತಿದ್ದಾರೆ ಎಂದು ಬಸವರಾಜ ಬೊಮ್ಮಾಯಿ ದೂರಿದರು.

**<><*<><>*><>**

ಒತ್ತಡದ ಬದುಕಿನಲ್ಲಿ ಕ್ರೀಡೆಗಳು ಉತ್ತಮ ಆರೋಗ್ಯಕ್ಕೆ ಸಹಕಾರಿ ಎಂದು ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್‌ದಿವಾಕರ್ ಹೇಳಿದ್ದಾರೆ. ಹೊಸಪೇಟೆ ನಗರದ ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಆವರಣದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ಹಮ್ಮಿಕೊಂಡಿದ್ದ ಕ್ರಿಕೆಟ್ ಆಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪತ್ರಕರ್ತರು ತಮ್ಮ ಒತ್ತಡದ ಕೆಲಸದಲ್ಲಿ ಬಿಡುವು ಮಾಡಿಕೊಂಡು ಕ್ರೀಡೆಯನ್ನು ಆಯೋಜನೆ ಮಾಡಿರುವುದು ನಿಜಕ್ಕೂ ಶ್ಲಾಘನೀಯ ಎಂದರು. ಈ ಸಂದರ್ಭದಲ್ಲಿ ವಿಜಯನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶ್ರೀಹರಿಬಾಬು ಉಪಸ್ಥಿತರಿದ್ದರು.

**<><*<><>*><>**

ಕೌನ್ಸಿಲಿಂಗ್ ಮೂಲಕ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವರ್ಗಾವಣೆ ನಡೆಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-೧ ಮತ್ತು ಗ್ರೇಡ್-೨ ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಶೇಕಡಾ ೯ ರಷ್ಟು ಕಡ್ಡಾಯ ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆ ಮತ್ತು ಸಾಮಾನ್ಯ ಕೋರಿಕೆ ವರ್ಗಾವಣೆ ಹಾಗೂ ಶೇಕಡಾ ೬ ರಷ್ಟು ವಿಶೇಷ ಪ್ರಕರಣಗಳ ಕೋರಿಕೆ ವರ್ಗಾವಣೆಗಳನ್ನು ಕೌನ್ಸೆಲಿಂಗ್ ಮೂಲಕ ನಡೆಸಲು

ಉದ್ದೇಶಿಸಲಾಗಿದೆ. ಜುಲೈ ೨೮ ರೊಳಗೆ ಈ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು ಎಂದು ಅವರು ಮಾಹಿತಿ ನೀಡಿದ್ದಾರೆ.

**<><*<><>*><>**

ಕಳೆದ ಚುನಾವಣೆ ವೇಳೆ ಕಾಂಗ್ರೆಸ್ ೫೬೦ ಭರವಸೆಗಳನ್ನು ನೀಡಿತ್ತು. ಇದರಲ್ಲಿ ೨೩೫ ಭರವಸೆಗಳನ್ನು ಈಗಾಗಲೇ ಈಡೇರಿಸಿದ್ದೇವೆ. ಮುಂದಿನ ಮೂರು ವರ್ಷಗಳಲ್ಲಿ ಉಳಿದ ಭರವಸೆಗಳನ್ನೂ ಈಡೇರಿಸುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಮತ್ತು ಜಿಲ್ಲಾಡಳಿತ ಆಯೋಜಿಸಿದ್ದ ಬುಡಕಟ್ಟು ಸಾಂಸ್ಕೃತಿಕ ಉತ್ಸವ, ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ನಾಮಫಲಕ ಅನಾವರಣ ಹಾಗೂ ೩೭೧ ಜೆ ದಶಮಾನೋತ್ಸವ ಮತ್ತು ೯೩೬ ಕೋಟಿ ರೂಪಾಯಿ ವೆಚ್ಚದ ವಿವಿಧ ಕಾಮಗಾರಿಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು. ಕಾಂಗ್ರೆಸ್ ಸರ್ಕಾರ ಬಂದ ನಂತರ ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ೧೩ ಸಾವಿರದ ೫೦೦ ಕೋಟಿ ರೂಪಾಯಿ ನೀಡಲಾಗಿದೆ. ೩೭೧ಜೆ ಜಾರಿ ಕಾರಣದಿಂದ ಈ ಭಾಗದ ಯುವಕ, ಯುವತಿಯರು ಎಂಜಿನಿಯರ್, ವೈದ್ಯರು ಸೇರಿದಂತೆ ಸರ್ಕಾರಿ ಅಧಿಕಾರಿಗಳಾಗುತ್ತಿದ್ದಾರೆ. ಇದು ಸರ್ಕಾರದ ಸಾಧನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

**<><*<><>*><>**

ರಾಜ್ಯದ ಕರಾವಳಿಯಲ್ಲಿ ನೈರುತ್ಯ ಮುಂಗಾರು ಸಾಮಾನ್ಯವಾಗಿದ್ದು, ಒಳನಾಡಿನಲ್ಲಿ ದುರ್ಬಲವಾಗಿತ್ತು. ಕರಾವಳಿಯ ಹೆಚ್ಚಿನ ಸ್ಥಳಗಳಲ್ಲಿ, ದಕ್ಷಿಣ ಒಳನಾಡಿನ ಕೆಲವು ಸ್ಥಳಗಳಲ್ಲಿ ಹಾಗೂ ಉತ್ತರ ಒಳನಾಡಿನ ಒಂದೆರಡು ಸ್ಥಳಗಳಲ್ಲಿ ಮಳೆಯಾಗಿದೆ ಎಂದು ಭಾರತೀಯ ಹವಾಮಾನ ತಿಳಿಸಿದೆ. ಮೂಡುಬಿದ್ರೆ ಮತ್ತು ಉಪ್ಪಿನಂಗಡಿಯಲ್ಲಿ ಅತೀ ಹೆಚ್ಚು ೧೧ ಸೆಂಟಿ ಮೀಟರ್ ಮಳೆಯಾಗಿದೆ. ಮಾಣಿ, ಬಂಟ್ವಾಳದಲ್ಲಿ ತಲಾ ೧೦ ಸೆಂಟಿ ಮೀಟರ್, ಕ್ಯಾಸಲ್‌ರಾಕ್ ೯, ಕದ್ರಾ ಮತ್ತು ಗೇರುಸೊಪ್ಪ ತಲಾ ೮, ಸಿದ್ದಾಪುರ, ಸುಳ್ಯ, ನಾಪೋಕ್ಲು ಮತ್ತು ಶೃಂಗೇರಿಯಲ್ಲಿ ತಲಾ ೭ ಸೆಂಟಿ ಮೀಟರ್ ಮಳೆಯಾಗಿದೆ. ಮುಂದಿನ ಮೂರು ದಿನಗಳ ಕಾಲ ರಾಜ್ಯದ ಕೆಲವು ಸ್ಥಳಗಳಲ್ಲಿ ಮಳೆಯಾಗಲಿದೆ. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಸುತ್ತಮುತ್ತಾ ಸಾಮಾನ್ಯವಾಗಿ ಮೋಡಕವಿದ ವಾತಾವರಣ. ಗಾಳಿಯೊಂದಿಗೆ ಹಗುರ ಮಳೆ ಸಾಧ್ಯತೆ. ಗರಿಷ್ಠ ತಾಪಮಾನ ೨೮ ಹಾಗೂ ಕನಿಷ್ಠ ತಾಪಮಾನ ೨೦ ಡಿಗ್ರಿ ಸೆಲ್ಸಿಯಸ್ ಸಂಭವ.

**<><*<><>*><>**

ಮಧ್ಯ ಕರ್ನಾಟಕ ಭಾಗದ ಜೀವನಾಡಿ ಶಿವಮೊಗ್ಗ ಜಿಲ್ಲೆಯ ಭದ್ರಾ ಅಣೆಕಟ್ಟೆ ಬಳಿ ಅವೈಜ್ಞಾನಿಕ ಕಾಮಗಾರಿ ಆರೋಪಿಸಿ ಇಂದು ರೈತರು ಪ್ರತಿಭಟನೆ ನಡೆಸಿದರು. ಜಲಜೀವನ್ ಯೋಜನೆಯ ಏತ ನೀರಾವರಿಗೆ ನೀರು ಪೂರೈಸಲು ಭದ್ರಾ ಜಲಾಶಯದ ಬಲದಂಡೆ ಕಾಲುವೆ ಒಡೆದು, ನಡೆಸುತ್ತಿರುವ ಕಾಮಗಾರಿಯು ಅವೈಜ್ಞಾನಿಕ ಕಾಮಗಾರಿಯಾಗಿದೆ ಎಂದು ಆರೋಪಿಸಿ ಜಲಾಶಯದ ಬಳಿ ರೈತರು ಪ್ರತಿಭಟನೆ ನಡೆಸಿದರು. ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ನೇತೃತ್ವದಲ್ಲಿ ನಡೆದ ಈ ಪ್ರತಿಭಟನೆಯಲ್ಲಿ ನೂರಾರು ರೈತರು ಭಾಗಿಯಾಗಿದ್ದರು. ಪ್ರತಿಭಟನೆ ಹಿನ್ನೆಲೆಯಲ್ಲಿ ಭದ್ರಾ ಜಲಾಶಯದ ಸುತ್ತಮುತ್ತ ಭಾರೀ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಈ ವೇಳೆ ಭದ್ರಾ ಜಲಾಶಯಕ್ಕೆ ಮುತ್ತಿಗೆ ಹಾಕಲು ಮುಂದಾದ ರೈತರನ್ನು ಪೊಲೀಸರು ತಡೆದು ವಶಪಡಿಸಿಕೊಂಡರು.

**<><*<><>*><>**

ಮಕ್ಕಳು ಮತ್ತು ಗರ್ಭಿಣಿಯರಲ್ಲಿ ಹೆಚ್ಚುತ್ತಿರುವ ರಕ್ತಹೀನತೆ ಹೋಗಲಾಡಿಸುವ ನಿಟ್ಟಿನಲ್ಲಿ ಎಸ್.ಎಸ್.ಕೇರ್ ಟ್ರಸ್ಟ್‌ನಿಂದ ನಿರಂತರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಹೇಳಿದ್ದಾರೆ. ದಾವಣಗೆರೆಯಲ್ಲಿ ಎಸ್.ಎಸ್.ಕೇರ್ ಟ್ರಸ್ಟ್‌ನ ನೂತನ ಕಚೇರಿ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಕ್ಕಳಲ್ಲಿ ರಕ್ತಹೀನತೆ ತಡೆಗಟ್ಟಲು ಮೂರು ಗ್ರಾಮಗಳನ್ನು ದತ್ತು ಪಡೆಯಲಾಗಿದ್ದು, ಅಂಗನವಾಡಿ ಮಕ್ಕಳು ಮತ್ತು ಗರ್ಭಿಣಿ ಮಹಿಳೆಯರನ್ನು ನಿರಂತರ ತಪಾಸಣೆ ಮತ್ತು ಜಾಗೃತಿ ಮೂಡಿಸಲಾಗುತ್ತಿದೆ ಎಂದರು. ಇಲ್ಲಿಯವರೆಗೂ ೨೦ ಸಾವಿರಕ್ಕೂ ಅಧಿಕ ಮೂತ್ರಪಿಂಡ ರೋಗಿಗಳಿಗೆ ಸಂಪೂರ್ಣವಾಗಿ ಉಚಿತ ಡಯಾಲಿಸಸ್ ಮಾಡಲಾಗಿದೆ. ೫ ಸಾವಿರಕ್ಕೂ ಅಧಿಕ ಮಹಿಳೆಯರಿಗೆ ಸ್ತನ ಮತ್ತು ಗರ್ಭಾಶಯ ಕ್ಯಾನ್ಸರ್ ತಪಾಸಣೆ ಮತ್ತು ಸೂಕ್ತ ಚಿಕಿತ್ಸೆ ನೀಡಲಾಗಿದೆ ಎಂದು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಮಾಹಿತಿ ನೀಡಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**